ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 636 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 11.12.2023 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಮೂಲಕ ಗ್ರಾಮೀಣ ಭಾಗದ ಮತ್ತು ಹಳ್ಳಿ ಪ್ರದೇಶದಲ್ಲಿ ವಾಸಿಸುತ್ತಿರುವ ನಿರುದ್ಯೋಗಿ ಯುವ ಜನತೆಗೆ ಜೀವನೋಪಾಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಜಾರಿಗೆ ತಂದಿರುವ ಸ್ಕಿಲ್ ಆನ್ ವಿಲ್ ಯೋಜನೆಯ ಪ್ರಸ್ತುತ ಯಾವ ಹಂತದಲ್ಲಿದೆ; | ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಮೂಲಕ ಗ್ರಾಮೀಣ ಭಾಗದ ಮತ್ತು ಹಳ್ಳಿ ಪ್ರದೇಶದಲ್ಲಿ ವಾಸಿಸುತ್ತಿರುವ ನಿರುದ್ಯೋಗಿ ಯುವ ಜನತೆಗೆ ಜೀವನೋಪಾಯ ಒದಗಿಸುವ ನಿಟ್ಟಿನಲ್ಲಿ ಸ್ಕಿಲ್ ಅನ್ ವೀಲ್ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಅನುಷ್ಠಾನಗೊಳಿಸಲಾಗಿದ್ದು, ಪ್ರಗತಿ ಹಂತದಲ್ಲಿರುತ್ತದೆ.<br>ಪ್ರಸ್ತುತ ಯಾದಗಿರಿ ಜಿಲ್ಲೆಯ 75 ಅಭ್ಯರ್ಥಿಗಳಿಗೆ ಬ್ಯೂಟಿಷಿಯನ್ ವೃತ್ತಿಯಡಿ ಹಾಗೂ ರಾಯಚೂರು ಜಿಲ್ಲೆಯ 75 ಅಭ್ಯರ್ಥಿಗಳಿಗೆ ಎಲೆಕ್ಟ್ರಿಷಿಯನ್ ವೃತ್ತಿಯಡಿ ಅಲ್ಪಾವಧಿ ಕೌಶಲ್ಯಾಧಾರಿತ ತರಬೇತಿ ನೀಡಲಾಗಿದೆ.<br>ಮುಂದುವರೆದು, ಮಂಗಳೂರು ಜಿಲ್ಲೆಯ 30 ಅಭ್ಯರ್ಥಿಗಳಿಗೆ ಎಲೆಕ್ಟ್ರಿಷಿಯನ್ ವೃತ್ತಿಯಡಿ ಅಲ್ಪಾವಧಿ ತರಬೇತಿ ನೀಡಲಾಗಿದ್ದು, ಉಳಿದ 75 ಅಭ್ಯರ್ಥಿಗಳಿಗೆ ತರಬೇತಿ ಹಮ್ಮಿಕೊಳ್ಳಲು ಕ್ರಮವಹಿಸಲಾಗಿದೆ.<br>ಉಡುಪಿ ಜಿಲ್ಲೆಯಲ್ಲಿ 45 ಅಭ್ಯರ್ಥಿಗಳಿಗೆ ಬ್ಯೂಟಿಷಿಯನ್ ವೃತ್ತಿಯಡಿ ಅಲ್ಪಾವಧಿ ತರಬೇತಿ ನೀಡಲಾಗಿದ್ದು, ಉಳಿದಂತೆ 60 ಅಭ್ಯರ್ಥಿಗಳಿಗೆ ತರಬೇತಿ ಹಮ್ಮಿಕೊಳ್ಳಲು ಕ್ರಮವಹಿಸಲಾಗಿದೆ. |
| (ಆ) ಸ್ವಯಂ ಉದ್ಯೋಗ ಕಂಡುಕೊಳ್ಳಲು ಸಹಕಾರಿಯಾಗುವ ನಿಟ್ಟಿನಲ್ಲಿ ಉಚಿತ ತರಬೇತಿ ವ್ಯವಸ್ಥೆಯನ್ನು ರಥದ ಮೂಲಕ ಕಲ್ಪಿಸಲಾಗಿದು, ಯೋಜನೆಯ ಉದ್ದೇಶ ಪೂರ್ಣ ಪ್ರಮಾಣದಲ್ಲಿ ಈಡೇರಿದೆಯೇ; ಗ್ರಾಮೀಣ ಜನರಿಗೆ ಯೋಜನೆಯಿಂದ ಪ್ರಯೋಜನವಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಸ್ಕಿಲ್ ಅನ್ ವೀಲ್ಸ್ ಕಾರ್ಯಕ್ರಮವು ಸೇವಾ ಆಧಾರಿತ ತಂತ್ರಜ್ಞರನ್ನು ಮೂಲಭೂತ ಸೇವಾ ಕೌಶಲ್ಯಗಳೊಂದಿಗೆ ಪ್ರಾರಂಭಿಸುವ ಮೂಲಕ ಹೆಚ್ಚಿನ ಸುಧಾರಿತ ತಂತ್ರಜ್ಞಾನ ಕೌಶಲ್ಯಗಳಿಲ್ಲದೆ ಗ್ರಾಮೀಣ ಭಾಗದ ಯುವಜನತೆಯ ಜೀವನೋಪಾಯವನ್ನು ಸುಧಾರಿಸುವ ಹಾಗೂ ಸ್ವಯಂ ಉದ್ಯೋಗಿಗಳನ್ನಾಗಿಸುವ ಗುರಿಯನ್ನು ಹೊಂದಿದ್ದು, ಎಲೆಕ್ಟ್ರಿಷಿಯನ್ ತಂತ್ರಜ್ಞ, ಗೃಹೋಪಯೋಗಿ ಉಪಕರಣಗಳ ದುರಸ್ತಿ, ಮೋಟಾರ್ ವೈಂಡಿಂಗ್ ರಿಪೇರಿ, ಸೌಂದರ್ಯ ಚಿಕಿತ್ಸಕ ತರಬೇತಿಯು ಸಹಾಯಕ ಸೌಂದರ್ಯ ಚಿಕಿತ್ಸಕ ಪಾದೋಪಚಾರ, ಹಸ್ತಾಲಂಕಾರ ಮಾಡುವುದು, ಸ್ಪಾ ಥೆರಪಿಸ್ಟ್ ಇತ್ಯಾದಿ ವೃತ್ತಿಗಳನ್ನು ಒಳಗೊಂಡಿರುತ್ತದೆ. ಯೋಜನೆಯಿಂದ ಗ್ರಾಮೀಣ ಜನರಿಗೆ ಯೋಜನೆಯು ಪ್ರಯೋಜನವಾಗುತ್ತಿದೆ. |

| | |
|---|---|
| (ಇ) ಇಲ್ಲಿಯವರೆಗೆ ಸದರಿ ಯೋಜನೆಗೆ ಸರ್ಕಾರ ಮಾಡಿರುವ ಸಂಪೂರ್ಣ ವೆಚ್ಚವೆಷ್ಟು: ಪ್ರಾಯೋಗಿಕವಾಗಿ ಮತ್ತು ಸೈದ್ಧಾಂತಿಕವಾಗಿ ಇಲ್ಲಿಯವರೆಗೆ ಎಷ್ಟು ಜನರಿಗೆ ತರಬೇತಿಯನ್ನು ನೀಡಲಾಗಿದೆ; ತರಬೇತಿ ಪಡೆದವರು ಸ್ವಯಂ ಉದ್ಯೋಗ ಕಂಡುಕೊಳ್ಳಲು ಸರ್ಕಾರ ಯಾವ ರೀತಿ ಬೆಂಬಲ ನೀಡುತ್ತಿದೆ? | ಒಟ್ಟಾರೆ ಈ ಕಾರ್ಯಕ್ರಮದಡಿ 225 ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲಾಗಿದ್ದು, ತರಬೇತಿ ವೆಚ್ಚ, ಮಾಹಿತಿ, ಶಿಕ್ಷಣ ಮತ್ತು ಸಂವಹನ (IEC) ಮತ್ತು ಜಾಹೀರಾತು ವೆಚ್ಚಗಳನ್ನು ಒಳಗೊಂಡಂತೆ ಒಟ್ಟು ಮೊತ್ತವು ರೂ.25,89,701/- (ಇಪ್ಪತ್ತೈದು ಲಕ್ಷ ಎಂಬತ್ತೊಂಬತ್ತು ಸಾವಿರದ ಏಳುನೂರಾ ಒಂದು ರೂ.ಗಳನ್ನು ಮಾತ್ರ) ಗಳನ್ನು ವ್ಯಯಿಸಲಾಗಿರುತ್ತದೆ.<br>ತರಬೇತಿ ಪಡೆದ ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಸಾಲ ಸೌಲಭ್ಯಗಳನ್ನು ಒದಗಿಸುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಕುರಿತು ಜಾಗೃತಿಯನ್ನು ಸಹ ಮೂಡಿಸಲಾಗುತ್ತಿದೆ. |

ಸಂಖ್ಯೆ: ಕೌಉಜೀಇ 17 ಕೌಗುಪ್ರ 2023

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಇಲಾಖಾ ಸಚಿವರು.